ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್ಎಸ್ಎಸ್/ಚಟುವಟಿಕೆ/02/2019-20

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ,ಬೆಂಗಳೂರು-01
ದಿನಾಂಕ: 26-08-2019

**ಸುತ್ತೋಲೆ**

ವಿಷಯ: ಫಿಟ್ ಇಂಡಿಯಾ ಅಭಿಯಾನ ಅನುಷ್ಠಾನ ಮಾಡುವ ಬಗ್ಗೆ.

ಉಲ್ಲೇಖ: 1) ರಾಜ್ಯ ಸರ್ಕಾರದ ಪತ್ರ ಸಂಖ್ಯೆ: ಯುಸೇಇ/ರಾಸೇಯೋ/13/2019-20/306 ದಿನಾಂಕ: 23.08.2019.

2) ಸಮಗ್ರ ಶಿಕ್ಷಣ ಕರ್ನಾಟಕ ಇವರ ರಾಜ್ಯ ಯೋಜನಾ ಪತ್ರ ಸಂಖ್ಯೆ: ಎಸ್.ಎಸ್.ಕೆ/ಕ್ರೀಡೆ/Fit India movement/2019-20 ದಿನಾಂಕ: 21-08-2019

*****

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರವು ಆಗಸ್ಟ್ ತಿಂಗಳಿಂದ ಫಿಟ್ ಇಂಡಿಯಾ ಅಭಿಯಾನವನ್ನು ಅನುಷ್ಠಾನ ಗೊಳಿಸುತ್ತಿದೆ. ಈ ಕಾರ್ಯಕ್ರಮವನ್ನು **ಮಾನ್ಯ ಪ್ರಧಾನಮಂತ್ರಿ, ಶ್ರೀ.ನರೇಂದ್ರ ಮೋದಿಯವರು** ದಿ:29.08.2019 ರಂದು ಪ್ರಮಾಣವಚನ ಬೋಧಿಸುವುದರೊಂದಿಗೆ ಚಾಲನೆ ನೀಡಿ ಅದರ ಮಹತ್ವವನ್ನು ತಿಳಿಸಲಿದ್ದಾರೆ.

ಸದರಿ ಕಾರ್ಯಕ್ರಮವು ದೂರದರ್ಶನದಲ್ಲಿ ನೇರ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ವೀಕ್ಷಿಸಲು ಹಾಗೂ ಪ್ರತಿಜ್ಞೆ ಕೈಗೊಳ್ಳಲು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿರುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳು ಅವಕಾಶ ಕಲ್ಪಿಸುವುದು. ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಬೋಧಕ/ಬೋಧಕೇತರ ಸಿಬ್ಬಂದಿಯವರೆಲ್ಲರೂ ನೇರ ಪ್ರಸಾರದ ವೀಕ್ಷಣೆಯಿಂದ ಈ ಅಭಿಯಾನದ ಸಮಗ್ರ ಮಾಹಿತಿ ಪಡೆಯುವುದು.

ಸದರಿ ವಿಚಾರವಾಗಿ ಕಾಲ ಕಾಲಕ್ಕೆ ಬರುವ ನಿರ್ದೇಶನಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುವಂತೆ ಮಾಡಲು ಸೂಕ್ತ ಕ್ರಮ ಕೈಗೊಂಡು ಯಶಸ್ವಿಗೊಳಿಸುವುದು. ಹೆಚ್ಚಿನ ಮಾಹಿತಿಯನ್ನು https://economictimes.indiatimes.com/news/politics-and-nation/coming-up-fit-india-campaign-from-august-29/articleshow/70339371.cms?from=mdr ರ ಮೂಲಕ ಪಡೆಯಬಹುದಾಗಿದೆ.

ನಿರ್ದೇಶಕರು

ಇವರಿಗೆ, ರಾಜ್ಯದ ಎಲ್ಲಾ ಸರ್ಕಾರಿ /ಅನುದಾನಿತ/ಖಾಸಗಿ, ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ -ಸೂಕ್ತ ಕ್ರಮಕ್ಕಾಗಿ

ಪ್ರತಿ: 1) ರಾಜ್ಯ ಎನ್ ಎಸ್ ಎಸ್ ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿಗಳು ರಾಷ್ಟ್ರೀಯ ಸೇವಾ ಯೋಜನೆ ಕೋಶ,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ. ಬೆಂಗಳೂರು-01

2) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು-01

3) ಇ-ಆಡಳಿತ ವಿಭಾಗಕ್ಕೆ ಅಂತರ್‌ಜಾಲತಾಣದಲ್ಲಿ ಪ್ರಕಟಿಸಲು

4) ಕಛೇರಿ ಪ್ರತಿ.